ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(16)

ಇಲಾಖೆ / ವಿಷಯ : DEPARTMENT / SUBJECT: BDA

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 23/12/20

# ಬಿಡಿಎ ಹಗರಣ ತನಿಖೆಗೆ ಎಸ್‌ಐಟಿ ರಚಿಸಲು ಮನವಿ

■ **ವಿಕ ಸುದ್ದಿಲೋಕ** ಬೆಂಗಳೂರು 23/12/20

**1985 ರಿಂದ 2020ರವರೆಗಿನ ಹಗರಣ ತನಿಖೆ**

**ಆಯುಕ್ತರ ಮೂಲಕ ಪ್ರಸ್ತಾವನೆ ಸಲ್ಲಿಸಲು ಸಿಎಂ ಸೂಚನೆ**

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ 1985ರಿಂದ ಇಲ್ಲಿವರೆಗೆ ನಡೆದಿರುವ ಹಗರಣಗಳ ತನಿಖೆಗೆ ವಿಶೇಷ ತನಿಖಾ ತಂಡವನ್ನು ರಚಿಸುವಂತೆ ಬಿಡಿಎ ಅಧ್ಯಕ್ಷ ಎಸ್.ಆರ್.ವಿಶ್ವನಾಥ್ ಅವರು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಮನವಿ ಮಾಡಿದ್ದಾರೆ.



ಮಂಗಳವಾರ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಭೇಟಿ ಮಾಡಿದ ವಿಶ್ವನಾಥ್, ''ಕಳೆದ ಹಲವು ವರ್ಷಗಳಿಂದ ಬಿಡಿಎಗೆ ಸೇರಿದ ಸಾವಿರಾರು ಕೋಟಿ ರೂಪಾಯಿ ಮೌಲ್ಯದ ನಿವೇಶನಗಳನ್ನು ಏಜೆಂಟರ ಜೊತೆ ಶಾಮೀಲಾಗಿ ಪಟ್ಟಭದ್ರರಿಗೆ ಮಾರಾಟ ಮಾಡುತ್ತಾ ಬರಲಾಗಿದೆ. ಇದೀಗ ನಕಲಿ ದಾಖಲೆ ಸೃಷ್ಟಿಸಿ ನಿವೇಶನಗಳನ್ನು ಹಂಚಿಕೆಗೆ ಹೊರಟಿದ್ದ ಪ್ರಕರಣವು ಬಿಡಿಎಗೆ ಒಂದು ಬಹುದೊಡ್ಡ ಕಪ್ಪುಚುಕ್ಕೆಯಾಗಿದೆ. ಇದರಿಂದಾಗಿ ಭ್ರಷ್ಟ ಅಧಿಕಾರಿಗಳು ಸಾರ್ವಜನಿಕರಲ್ಲಿ ಬಿಡಿಎಗೆ ಇದ್ದ ವಿಶ್ವಾಸ ಹೊರಟು ಹೋಗುವಂತೆ ಮಾಡಿದ್ದಾರೆ,'' ಎಂದು ವಿವರಿಸಿದರು.

''ಮನವಿಗೆ ಸ್ಪಂದಿಸಿರುವ ಮುಖ್ಯಮಂತ್ರಿ ಅವರು ಆಯುಕ್ತರಿಂದ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದ್ದಾರೆ. ಇನ್ನೆರಡು ಮೂರು ದಿನಗಳಲ್ಲಿ ಆಯುಕ್ತರು ಎಸ್‌ಐಟಿಗೆ ವಹಿಸಬಹುದಾದ ಹಗರಣಗಳ ಪಟ್ಟಿಯನ್ನು ಸಿದ್ಧಪಡಿಸಿ ಸರಕಾರಕ್ಕೆ ಮನವಿ ಸಲ್ಲಿಸಲಿದ್ದಾರೆ. ಇದನ್ನು ಮುಖ್ಯಮಂತ್ರಿಗಳು ಪರಿಶೀಲಿಸಿ ಎಸ್‌ಐಟಿ ರಚನೆ ಮತ್ತು ಅದರ ಸ್ವರೂಪದ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆ,'' ಎಂದರು.

''ಬಿಡಿಎಗೆ ಕಳಂಕ ತರಲು ಹೊರಟಿರುವ ಭ್ರಷ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ, ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸಿ, ಮತ್ತೆ ಬಿಡಿಎಯನ್ನು ಸಾರ್ವಜನಿಕ ಸ್ನೇಹಿಯನ್ನಾಗಿ ಮಾಡಲು ಎಲ್ಲಾ ಪ್ರಯತ್ನಗಳನ್ನು ಕೈಗೊಳ್ಳಲಾಗುವುದು,'' ಎಂದು ತಿಳಿಸಿದರು.